# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103 ☎ : 0816-2255650, 2273511 ಫ್ಯಾಕ್ಸ್ :0816-2270719

ಸಂಖ್ಯೆ:ತುವಿ: ಪ.ವಿ:ಬಿ.ಇಡಿ.:ಪ.ಶುಲ್ಕ:2016-17 : ದಿನಾಂಕ:18.10.2016

## ಅಧಿಸೂಚನೆ

**ವಿಷಯ:** 2016 ರ ನವಂಬರ್ ಮಾಹೆಯಲ್ಲಿ ನಡೆಯಲಿರುವ ಸ್ನಾತಕ ಶಿಕ್ಷಣ (B.Ed.) ಪದವಿಯ ಪ್ರಥಮ & ದ್ವಿತೀಯ ಸೆಮಿಸ್ಟರ್‌ನ (ಪೂರಕ) 2011-12 ನೇ ಶೈಕ್ಷಣಿಕ ಸಾಲಿನಿಂದ 2014-15 ನೇ ಶೈಕ್ಷಣಿಕ ಸಾಲಿಗೆ ಪ್ರವೇಶ ಪಡೆದು ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಂದ ಪರೀಕ್ಷೆಯ ಪರೀಕ್ಷಾ ಶುಲ್ಕ ಪಾವತಿಸುವ ಕುರಿತು.

**ಉಲ್ಲೇಖ:** 1. ಸಂಖ್ಯೆ:ತುವಿ: ಪ.ವಿ.:2015-16 :1170 ದಿನಾಂಕ:25.01.2016

2. ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ: 17.10.2016

*****

2016 ರ ನವಂಬರ್ ಮಾಹೆಯಲ್ಲಿ ನಡೆಯಲಿರುವ ಸ್ನಾತಕ ಶಿಕ್ಷಣ (B.Ed.) ಪದವಿಯ ಪ್ರಥಮ & ದ್ವಿತೀಯ ಸೆಮಿಸ್ಟರ್‌ನ (ಪೂರಕ) 2011-12 ನೇ ಶೈಕ್ಷಣಿಕ ಸಾಲಿನಿಂದ 2014-15 ನೇ ಶೈಕ್ಷಣಿಕ ಸಾಲಿಗೆ ಪ್ರವೇಶ ಪಡೆದು ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಂದ ಮಾತ್ರ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.

ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳ ಶುಲ್ಕದ ವಿವರಗಳನ್ನು ವಿಷಯದೊಂದಿಗೆ ಆನ್‌ಲೈನ್‌ನಲ್ಲಿ ನಮೂದಿಸುವುದು.

**ಶುಲ್ಕ ಪಾವತಿಸಲು ವಿವರವಾದ ದಿನಾಂಕಗಳು ಈ ಕೆಳಗಿನಂತಿವೆ.**

| ಕ್ರಮ ಸಂಖ್ಯೆ | ಶುಲ್ಕದ ವಿವರ | ಕೊನೆಯ ದಿನಾಂಕ |
|---|---|---|
| 1. | ವಿದ್ಯಾರ್ಥಿಗಳಿಗೆ ದಂಡ ರಹಿತ ಶುಲ್ಕ | 28.10.2016 |
| 2. | ವಿದ್ಯಾರ್ಥಿಗಳಿಗೆ ರೂ. 100/- ದಂಡ ಶುಲ್ಕದೊಂದಿಗೆ | 04.11.2016 |
| 3. | ಕಾಲೇಜಿನವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | 07.11.2016 |

**ಶುಲ್ಕದ ವಿವರ**

| ಕ್ರ.ಸಂ | ಸೆಮಿಸ್ಟರ್ | ಕೋರ್ಸ್ | ಪೂರಕ (ಒಂದು ವಿಷಯಕ್ಕೆ) |
|---|---|---|---|
| 1. | ಪ್ರಥಮ | ಬಿ.ಇಡಿ. | ರೂ. 100-00 |
| 2. | ದ್ವಿತೀಯ | | ರೂ. 100-00 |

ಈ ಮೇಲೆ ಸೂಚಿಸಿದ ಪರೀಕ್ಷಾ ಶುಲ್ಕದೊಂದಿಗೆ ಎಲ್ಲಾ ವಿದ್ಯಾರ್ಥಿಗಳು (**ಶುಲ್ಕ ರಿಯಾಯಿತಿ ಪಡೆದ ವಿದ್ಯಾರ್ಥಿಗಳೂ ಸಹ**) ಈ ಕೆಳಗೆ ನಮೂದಿಸಿರುವ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸುವುದು.

| ಕ್ರ.ಸಂ | ಇತರೆ ಶುಲ್ಕಗಳ ವಿವರ | ಮೊತ್ತ (ರೂ.ಗಳಲ್ಲಿ) |
|---|---|---|
| 1. | ಅಂಕಪಟ್ಟಿ ಶುಲ್ಕ( ಪ್ರತಿ ಸೆಮಿಸ್ಟರ್‌ಗೆ) | 150-00 |
| 2. | ಆನ್‌ಲೈನ್ ಅರ್ಜಿ ಶುಲ್ಕ (ಪ್ರತಿ ವಿದ್ಯಾರ್ಥಿಗೆ) | 25-00 |
| 3. | ಅರ್ಜಿ ಪರಿಶೀಲನಾ ಶುಲ್ಕ (ಪ್ರತಿ ವಿದ್ಯಾರ್ಥಿಗೆ) | 10-00 |
| 4. | ಪರೀಕ್ಷಾ ಸಿದ್ಧತಾ ಶುಲ್ಕ (Processing fee) ( ಪ್ರತಿ ಸೆಮಿಸ್ಟರ್‌ಗೆ) | 35-00 |
| 5. | ಪ್ರಾಯೋಗಿಕ ಪರೀಕ್ಷಾ ಶುಲ್ಕ ( ಒಂದು ವಿಷಯಕ್ಕೆ) | 50-00 |

**ಸಂಬಂಧಿಸಿದ ಶುಲ್ಕವನ್ನು ಮಾತ್ರ ಪಾವತಿಸತಕ್ಕದ್ದು.**

*ಅರ್ಜಿ ಪರಿಶೀಲನಾ ಶುಲ್ಕ ರೂ.10-00 ಗಳಲ್ಲಿ ರೂ. 06-00 ಗಳನ್ನು ಪರೀಕ್ಷಾ ಕೇಂದ್ರದಲ್ಲಿ ಉಳಿಸಿಕೊಂಡು ಉಳಿದ ರೂ.04-00 ಗಳನ್ನು ವಿಶ್ವವಿದ್ಯಾನಿಲಯದ ಖಾತೆಗೆ ಜಮಾ ಮಾಡುವುದು.

*ಆನ್‌ಲೈನ್ ಅರ್ಜಿ ಶುಲ್ಕ ರೂ.25-00 ಗಳಲ್ಲಿ ರೂ.05-00ಗಳನ್ನು ಕಾಲೇಜಿನವರು ಉಳಿಸಿಕೊಂಡು ಉಳಿದ ರೂ.20-00 ಗಳನ್ನು ವಿಶ್ವವಿದ್ಯಾನಿಲಯದ ಖಾತೆಗೆ ಜಮಾ ಮಾಡುವುದು.

## ಶುಲ್ಕ ವಿನಾಯಿತಿ

1. **ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ: (ಪೂರಕ)**

ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಎಲ್ಲಾ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ ಮಿತಿ ರೂ.2.50 ಲಕ್ಷದೊಳಗಿದ್ದರೆ ಅಂಥ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ಪಡೆಯಲು ಅರ್ಹರಿರುತ್ತಾರೆ.

ವಿಶ್ವವಿದ್ಯಾನಿಲಯದ ನಿಯಮಾನುಸಾರ ಪರೀಕ್ಷಾ ಶುಲ್ಕ ಪಾವತಿಸಲು ಅರ್ಹತೆ ಇಲ್ಲದಿದ್ದ ಪಕ್ಷದಲ್ಲಿ ಅಂತಹ ವಿದ್ಯಾರ್ಥಿಗಳಿಂದ ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಸ್ವೀಕರಿಸಲು ಹಾಗೂ ಪರೀಕ್ಷೆ ತೆಗೆದುಕೊಳ್ಳಲು ಅವಕಾಶವಿರುವುದಿಲ್ಲ.

**ಯಾವುದೇ ಕಾರಣಕ್ಕೂ ಪರೀಕ್ಷಾ ಕೇಂದ್ರವನ್ನು ಬದಲಾಯಿಸುವಂತಿಲ್ಲ.**

ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ವಿಶ್ವವಿದ್ಯಾನಿಲಯದ ಪರವಾಗಿ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ಸಂಗ್ರಹಿಸಿ, ನಂತರ ಒಟ್ಟು ಶುಲ್ಕವನ್ನು ಕ್ರೋಢೀಕರಿಸಿ ವಿಶ್ವವಿದ್ಯಾನಿಲಯದ ನಿಧಿಗೆ RTGS/NEFT **ಮೂಲಕ ಎಸ್.ಬಿ.ಎಂ ಖಾತೆ ನಂ.54040241380 ಗೆ ಪರೀಕ್ಷಾ ಶುಲ್ಕವನ್ನು ದಿನಾಂಕ: 07.11.2016 ರೊಳಗೆ ಪಾವತಿಸಿದ ಮೂಲ ಪ್ರತಿಯನ್ನು ಹಣಕಾಸು ವಿಭಾಗಕ್ಕೆ ಹಾಗೂ ದೃಢೀಕೃತ ಜೆರಾಕ್ಸ್ ಪ್ರತಿಯನ್ನು ಪರೀಕ್ಷಾಂಗ ವಿಭಾಗಕ್ಕೆ ಸಲ್ಲಿಸುವುದು.**

**ಪರೀಕ್ಷಾ ಶುಲ್ಕದ ಹಣಕಾಸು ಪಟ್ಟಿಯನ್ನು ದ್ವಿಪ್ರತಿಗಳಲ್ಲಿ ತಪ್ಪದೇ ಸಲ್ಲಿಸುವುದು(ಪರೀಕ್ಷಾಂಗ ವಿಭಾಗಕ್ಕೆ ಒಂದು ಪ್ರತಿ ಮತ್ತು ಹಣಕಾಸು ವಿಭಾಗಕ್ಕೆ ಒಂದು ಪ್ರತಿ).**

ಪ್ರಾಯೋಗಿಕ (Practical) ಪರೀಕ್ಷೆಗಳನ್ನು ಸೈದ್ಧಾಂತಿಕ (Theory) ಪರೀಕ್ಷೆಗಳಿಗಿಂತ ಮೊದಲು ನಡೆಸತಕ್ಕದ್ದು. ಪ್ರಾಯೋಗಿಕ ಪರೀಕ್ಷಾ ವೇಳಾಪಟ್ಟಿಯನ್ನು ಪರೀಕ್ಷಾ ಅಧೀಕ್ಷಕರು ಸಿದ್ಧಪಡಿಸಿ ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಲ್ಲಿ ಪ್ರಕಟಿಸುವುದು ಮತ್ತು ಅದರ ಒಂದು ಪ್ರತಿಯನ್ನು ಕುಲಸಚಿವರು(ಮೌಲ್ಯಮಾಪನ) ಇವರಿಗೆ ಸಲ್ಲಿಸುವುದು.

ಸೈದ್ಧಾಂತಿಕ(ಪಠ್ಯ ವಿಷಯ) ಪರೀಕ್ಷೆಗಳ ವಿವರಗಳನ್ನೊಳಗೊಂಡ ವೇಳಾಪಟ್ಟಿ ಮತ್ತು ಪರೀಕ್ಷಾ ಕೇಂದ್ರವನ್ನು ಮುಂದೆ ಪ್ರಕಟಿಸಲಾಗುವುದು.

**ವಿಶೇಷ ಸೂಚನೆ:** ತುಮಕೂರು ವಿಶ್ವವಿದ್ಯಾನಿಲಯದ ಸಂಯೋಜನೆಗೊಳಪಟ್ಟ ಕಾಲೇಜುಗಳು ಮಾತ್ರ ಪರೀಕ್ಷಾ ಶುಲ್ಕವನ್ನು ಅರ್ಹ ವಿದ್ಯಾರ್ಥಿಗಳಿಂದ ಪಾವತಿಸಿಕೊಳ್ಳುವುದು.

ಕುಲಸಚಿವರು(ಮೌಲ್ಯಮಾಪನ)

**ಗೆ,ಪ್ರಾಂಶುಪಾಲರು, ಸಂಯೋಜಿತ ಸ್ನಾತಕ ಶಿಕ್ಷಣ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**

**ಪ್ರತಿಗಳು:**

1. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಎಂ.ಎಸ್. ಬಿಲ್ಡಿಂಗ್-2, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560 001.
2. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಕುಲಸಚಿವರ ಆಪ್ತಕಾರ್ಯಾಲಯ ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಉಪಕುಲಸಚಿವರು, ಶೈಕ್ಷಣಿಕ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಫಲಿತಾಂಶ ಗಣಕೀಕರಣ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
8. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.(ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು)
9. ಕಛೇರಿ ಪ್ರತಿ.